# ಪೊಲೀಸ್ ಇಲಾಖೆ

## ಸಶಸ್ತ್ರ ಮೀಸಲು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) ಹುದ್ದೆಗಳ ನೇಮಕಾತಿ

**(ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)**

**ಅಧಿಸೂಚನೆ ಸಂಖ್ಯೆ. 85/ನೇಮಕಾತಿ–2/2019–20**

ವಿಷಯ: ಸಶಸ್ತ್ರ ಮೀಸಲು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) (ಪುರುಷ) ಹಾಗೂ ಸೇವೆಯಲ್ಲಿರುವವರು ಒಳಗೊಂಡಂತೆ ಖಾಲಿ ಹುದ್ದೆಗಳ ನೇರ ನೇಮಕಾತಿ ಕುರಿತು.

~*~*~*~

1. ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಶಸ್ತ್ರ ಮೀಸಲು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) (ಪುರುಷ) ಹಾಗೂ ಸೇವೆಯಲ್ಲಿರುವವರು ಒಳಗೊಂಡಂತೆ ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ನೌಕರರ ಸೇವೆಗಳು ಸೇರಿದಂತೆ (ನೇಮಕಾತಿ) ನಿಯಮ 2004 ಮತ್ತು ಅದರ (ತಿದ್ದುಪಡಿ) ನಿಯಮ, 2009, ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ಸೇವೆಗಳನ್ನು ಒಳಗೊಂಡ (ನೇಮಕಾತಿ) (ತಿದ್ದುಪಡಿ) ನಿಯಮಗಳು 2014, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗೂ ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಈ ಅಧಿಸೂಚನೆಯನ್ನು ಪ್ರಕಟಿಸುತ್ತ ಅರ್ಹ ಅಭ್ಯರ್ಥಿಗಳಿಂದ ಆನ್–ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಜಿಗಳನ್ನು ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

**ವಿಶೇಷ ಸೂಚನೆ:–**

**ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ ಅಂಶಗಳು / ಮೀಸಲಾತಿಗಳನ್ನು ಆಧರಿಸಿ ನೇಮಕಾತಿ ಪ್ರಕ್ರಿಯೆಗೆ ಅವಕಾಶ ಕಲ್ಪಿಸುವುದರಿಂದ ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಯಾವುದೇ ಮಾಹಿತಿ / ಅಂಶ ಮೀಸಲಾತಿಯ ಬದಲಾವಣೆ ಕೋರಿ ಸಲ್ಲಿಸುವ ಮನವಿಯನ್ನು ಪರಿಗಣಿಸಲಾಗುವುದಿಲ್ಲ. ಆದ್ದರಿಂದ ಯಾವುದೇ ತಪ್ಪು / ಸುಳ್ಳು ಮಾಹಿತಿ ನೀಡದೆ ಸರಿಯಾದ ಮಾಹಿತಿ ನೀಡಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸತಕ್ಕದ್ದು.**

**2. ಶುಲ್ಕ:**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | `.250/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | `.100/– |

ಎ) ನಿಗದಿತ ಶುಲ್ಕವನ್ನು ನಗದು ರೂಪದಲ್ಲಿ **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ** ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು.

ಬಿ) ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.inನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿ ನೀಡದೆ ಆನ್–ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

**ಟಿಪ್ಪಣಿ:** ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ನಮೂದಿಸಿದಂತೆ ಅಭ್ಯರ್ಥಿಗೆ ಅನ್ವಯಿಸುವ ಒಟ್ಟು ಪರೀಕ್ಷಾ ಶುಲ್ಕವನ್ನು **ನಗದು ರೂಪದಲ್ಲಿ ಚಲನ್ ನೊಂದಿಗೆ ಮಾತ್ರ ಮೇಲೆ ನಮೂದಿಸಿರುವ ಬ್ಯಾಂಕ್‌ಗಳಲ್ಲಿ ಮತ್ತು ಅಂಚೆ ಕಛೇರಿಗಳಲ್ಲಿ** ಪಾವತಿಸತಕ್ಕದ್ದು. **ಡಿಡಿ, ಪೋಸ್ಟಲ್ ಆರ್ಡರ್,** ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

**3. ಆನ್–ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ:**

ಅರ್ಜಿದಾರ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.inನಲ್ಲಿ ನೀಡಲಾಗಿರುವ ಮಾಹಿತಿಸೂಚಿ / ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿ ಮಾಡಬೇಕು. ಇಲಾಖೆಯ ಅಧಿಕೃತ

ವೆಬ್‌ಸೈಟ್ www.ksp.gov.inನಲ್ಲಿನ Current Recruitment ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಆನ್-ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು.ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ 8(ಸಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy - less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಪ್ರವರ್ಗ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ, ವಿದ್ಯಾರ್ಹತೆ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡಬೇಕು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಾಗ ತ್ರಿಪ್ರತಿ (Triplicate) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ಘಟಕ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತವೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಶುಲ್ಕವನ್ನು **ಸ್ಥಳೀಯ ಅಂಚೆ ಕಚೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ನಗದು ರೂಪದಲ್ಲಿ ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು.**

ಅಭ್ಯರ್ಥಿಯು ಶುಲ್ಕ ಪಾವತಿಸಿದ ಎರಡು ದಿನಗಳ ನಂತರ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.inನಲ್ಲಿ My Application ನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಸದರಿ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಅರ್ಜಿ ಪ್ರತಿ ಮತ್ತು ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

**ಪ್ರಮುಖ ದಿನಾಂಕಗಳ ಮಾಹಿತಿ:**

- **ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ:15.07.2019 ಬೆಳಿಗ್ಗೆ 10.00 ಗಂಟೆಗೆ**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:05.08.2019 , ಸಂಜೆ 06.00 ಗಂಟೆಗೆ**
- **ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಅಂಚೆ ಕಚೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 07.08.2019.**

**ಸೂಚನೆ:**

- ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ನಿಗದಿತ ದಿನಾಂಕದೊಳಗೆ ಭರ್ತಿ ಮಾಡಿ ಸಲ್ಲಿಸಿರುವಂತ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.
- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು.
- ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 080-22943346 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. ಹಾಗೂ ತಾಂತ್ರಿಕ ತೊಂದರೆ ಎದುರಾದಲ್ಲಿ ಅದನ್ನು ಸ್ಥಗಿತಗೊಳಿಸಿ ಮತ್ತೊಮ್ಮೆ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಲು ತಿಳಿಸಲಾಗಿದೆ.

**ಟಿಪ್ಪಣಿ:** ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ಮತ್ತು ಮೀಸಲಾತಿ ವರ್ಗೀಕರಣವು ತಾತ್ಕಾಲಿಕವಾಗಿದ್ದು, ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

**ಸಶಸ್ತ್ರ ಮೀಸಲು ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) ಖಾಲಿ ಹುದ್ದೆಗಳ ವಿವರ:**

ಎ) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಪುರುಷ) – 37
ಬಿ) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಸೇವೆಯಲ್ಲಿರುವವರಿಗೆ – 03

**ಒಟ್ಟು = 40**

**ಟಿಪ್ಪಣಿ:** **ಮೇಲ್ಕಂಡ ಹುದ್ದೆಗಳಿಗೆ ಆಯುಕ್ತರ/ವಲಯ ಕಛೇರಿಗಳು ನೀಡಿರುವ ವರ್ಗೀಕರಣವನ್ನು ಅನುಬಂಧ–'ಎ' ನಲ್ಲಿ ಮತ್ತು ಕ್ರೋಢೀಕೃತ ವರ್ಗೀಕರಣವನ್ನು ಅನುಬಂಧ–'ಬಿ'ನಲ್ಲಿ ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.**

## 4. ಅರ್ಹತಾ ಷರತ್ತುಗಳು :

ಎ) ಭಾರತೀಯ ನಾಗರಿಕನಾಗಿರತಕ್ಕದ್ದು.

ಬಿ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಸಿ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

## 5. ವಯೋಮಿತಿ:

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 05.08.2019 ಕ್ಕೆ ಅಭ್ಯರ್ಥಿಗೆ ಕನಿಷ್ಠ 21 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

ಎ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 28 ವರ್ಷಗಳು.
ಬಿ) ಇತರೆ ಅಭ್ಯರ್ಥಿಗಳಿಗೆ 26 ವರ್ಷಗಳು.

**ಸೇವಾನಿರತ ಅಭ್ಯರ್ಥಿಗಳಿಗೆ:**

ಎ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 40 ವರ್ಷಗಳು.
ಬಿ) ಇತರೆ ಅಭ್ಯರ್ಥಿಗಳಿಗೆ 35 ವರ್ಷಗಳು.

***ಸೇವಾನಿರತ ಅಭ್ಯರ್ಥಿ:**

ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ ಸಹಾಯಕ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಕನಿಷ್ಠ 5 ವರ್ಷಗಳ ಸೇವೆಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 05.08.2019ಕ್ಕೆ ಪೂರ್ಣಗೊಳಿಸಿರಬೇಕು ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪೊಲೀಸ್ ಇಲಾಖೆಯಲ್ಲಿನ ಮೇಲ್ಕಂಡ ವೃಂದಗಳಲ್ಲಿ ಸೇವೆಸಲ್ಲಿಸುತ್ತಿರಬೇಕು.

**ಮಾಜಿ ಸೈನಿಕ ಅಭ್ಯರ್ಥಿಗಳಿಗೆ:**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ **"ಅವರು ಸೇವೆ ಸಲ್ಲಿಸಿದ ಅವಧಿ"** ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ. **ಈ ಕಾರಣದಿಂದ ಮಾಜಿ ಸೈನಿಕರು ಕಡ್ಡಾಯವಾಗಿ ಅರ್ಜಿಯಲ್ಲಿ ನಿಗದಿಪಡಿಸಲಾಗಿರುವ ಕಾಲಂನ್ನು ಭರ್ತಿ ಮಾಡತಕ್ಕದ್ದು ಹಾಗೂ ಭೂಸೇನೆ/ನೌಕಾಸೇನೆ/ವಾಯು ಸೇನೆಯಲ್ಲಿ ಸೇವೆ ಸಲ್ಲಿಸಿದಷ್ಟು ಅವಧಿಯನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.**

***ಮಾಜಿ ಸೈನಿಕರ ಬಗ್ಗೆ ವಿವರಣೆ:***

ಮಾಜಿ ಸೈನಿಕ ಎಂದರೆ ಸಶಸ್ತ್ರ ಸೇನೆಗಳಾದ ನಿಯಮಿತ ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್(Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್(General Reserved Engineering Force), ಲೋಕ್ ಸಹಾಯಕ್ ಸೇನಾ(Lok Sahayak Sena) ಮತ್ತು ಪ್ಯಾರಾ ಮಿಲಿಟರಿಪಡೆ(Para Military Forces) ಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಎ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಬಿ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

**ಅಥವಾ**

(ಸಿ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

(ಡಿ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ**: ವ್ಯಕ್ತಿಗಳು ಕೇಂದ್ರ ಸಶಸ್ತ್ರಸೇನೆಗಳ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

**ಗಮನಿಸಿ:** **BSF, CRPF, CISF** ಪಡೆಗಳಿಂದ ನಿವೃತ್ತರಾದವರನ್ನು **'ಮಾಜಿ ಸೈನಿಕ'** ಎಂದು ಪರಿಗಣಿಸಲಾಗುವುದಿಲ್ಲ.

ಇ) ಭಾರತ ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ.36034/27/84–ಸಿಬ್ಬಂದಿ (ಎಸ್‌ಸಿಟಿ), ದಿನಾಂಕ 02.05.1985 ರನ್ವಯ ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿ ಸೈನಿಕರ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ರದ್ದಾಗುತ್ತದೆ. ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ.ಒಇ/90/ಪೊಸಿಅ/2005, ದಿನಾಂಕ 02.02.2006ರ ಪತ್ರದಲ್ಲಿ ದಿನಾಂಕ 02.05.1985ರ ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿನ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. ಈ ವಿಷಯದ ಕುರಿತು ವೃಂದ ಮತ್ತು ನೇಮಕಾತಿ ನಿಯಮವಾದ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ಸೇವೆಗಳು ಸೇರಿದಂತೆ (ನೇಮಕಾತಿ) (ತಿದ್ದುಪಡಿ) ನಿಯಮ, 2009 ರಲ್ಲಿಯೂ ಸಹ ನಿಗದಿಪಡಿಸಲಾಗಿದೆ. ಆದ್ದರಿಂದ ಒಂದು ಬಾರಿ ಮಾಜಿ ಸೈನಿಕ ಮೀಸಲಾತಿಯನ್ನು ಉಪಯೋಗಿಸಿ ಸರ್ಕಾರಿ ಹುದ್ದೆಗೆ ಆಯ್ಕೆಯಾದ ಮಾಜಿ ಸೈನಿಕರು ಮತ್ತೊಮ್ಮೆ ಸದರಿ ಮೀಸಲಾತಿಯನ್ನು ಕೋರಲು ಬರುವುದಿಲ್ಲ. ಅಂತಹ ಮಾಜಿ ಸೈನಿಕ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

ಎಫ್) ಈ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದ ನಂತರ ಯಾವೊಬ್ಬ ಮಾಜಿ ಸೈನಿಕ ಅಭ್ಯರ್ಥಿಯು ಸರ್ಕಾರಿ ನೌಕರಿಯೊಂದಕ್ಕೆ ಮಾಜಿ ಸೈನಿಕ ಮೀಸಲಾತಿ ಪಡೆದು ಸೇರಿದರೆ, ಅಂತಹ ಮಾಜಿ ಸೈನಿಕ ತಾನು ನೌಕರಿ ಸೇರಿದ ಬಗ್ಗೆ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ / ಪೊಲೀಸ್ ಕಮೀಷನರ್ ಕಛೇರಿಗೆ ಮಾಹಿತಿ ನೀಡತಕ್ಕದ್ದು. ಮಾಹಿತಿ ನೀಡದೆ ತದನಂತರ ತಿಳಿದುಬಂದಲ್ಲಿ ಅಂತಹ ಮಾಜಿ ಸೈನಿಕ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು. ಇಂತಹ ಅಭ್ಯರ್ಥಿಯು ಮಾಜಿ ಸೈನಿಕ ಮೀಸಲಾತಿಗೆ ಅನರ್ಹನಾಗುತ್ತಾನೆ.

ಜಿ) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರಸೇನೆಯಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆ ಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರಸೇನೆಯ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ:** 1) ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತವಾಗಿರುತ್ತದೆ.

**2) ಸೈನ್ಯದಿಂದ ನಿವೃತ್ತಿ ಹೊಂದಿರುವ ಮಾಜಿ ಸೈನಿಕರ ಹೆಂಡತಿ ಅಥವಾ ಮಕ್ಕಳು ಮತ್ತು ಮಲ ಮಕ್ಕಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುವುದಿಲ್ಲ. ಆದರೆ ಕೇಂದ್ರ ಸಶಸ್ತ್ರ ಸೇನೆಯಲ್ಲಿ ಸೇವೆ ಸಲ್ಲಿಸುವಾಗ ಹತರಾದ /ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ಮಾಜಿ ಸೈನಿಕರ ಹೆಂಡತಿ ಅಥವಾ ಮಕ್ಕಳು ಮತ್ತು ಮಲ ಮಕ್ಕಳು ಮಾತ್ರ ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಅಂತಹ ಅಭ್ಯರ್ಥಿಗಳು ಅನುಬಂಧ–4ರಲ್ಲಿ ತಿಳಿಸಲಾಗಿರುವ ಅವಲಂಭಿತ ಪ್ರಮಾಣ ಪತ್ರವನ್ನು ಪಡೆದುಕೊಂಡು ಸದರಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅರ್ಜಿಯೊಂದಿಗೆ ಅಪ್‌ಲೋಡ್ ಮಾಡತಕ್ಕದ್ದು ಹಾಗೂ ಸಮಿತಿಯು ಸೂಚಿಸಿದಾಗ ಸದರಿ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು.**

## 6. ವಿದ್ಯಾರ್ಹತೆ:

ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 05.08.2019ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ಸೈನ್ಯದಲ್ಲಿ ನೀಡಿದ ಪದವಿ ಪ್ರಮಾಣ ಪತ್ರವನ್ನು ದಿನಾಂಕ: 05.08.2019 ರೊಳಗೆ ಪಡೆದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು).

**<u>ಸೇವಾನಿರತ ಅಭ್ಯರ್ಥಿಗಳಿಗೆ ವಿದ್ಯಾರ್ಹತೆ ಮತ್ತು ಅನುಭವ:</u>**

ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿ ಜೊತೆಯಲ್ಲಿ ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 5 ವರ್ಷಗಳ ಕನಿಷ್ಠ ಸೇವೆಯನ್ನು (ಅರ್ಜಿಸಲ್ಲಿಸುವ ಕೊನೆಯ ದಿನಾಂಕ ಅಂದರೆ 05.08.2019ಕ್ಕೆ ಹೊಂದಿರಬೇಕು) ಸಹಾಯಕ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಪೂರ್ಣಗೊಳಿಸಿರಬೇಕು ಹಾಗೂ ಹಾಲಿ ಪೊಲೀಸ್ ಇಲಾಖೆಯಲ್ಲಿ ಮೇಲಿನ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರಬೇಕು. (ಸೇವಾನಿರತ ಅಭ್ಯರ್ಥಿಗಳು ಅಧಿಸೂಚನೆಯ ಪುಟ ಸಂಖ್ಯೆ 24 ಮತ್ತು 25 ರಲ್ಲಿರುವ ಅನುಬಂಧ–'ಎ' & 'ಬಿ' ಯನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಅಂದರೆ 05.08.2019ರೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು).

**<u>ಟಿಪ್ಪಣಿ:</u>**

ಎ) ಮೇಲೆ ನಮೂದಿಸಿರುವ ವಿದ್ಯಾರ್ಹತೆ ಹಾಗೂ ಅನುಭವವನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಮತ್ತು ಅನುಭವವನ್ನು ಹಾಗೂ ಅಂಕಪಟ್ಟಿ ಹೊಂದಿರುವುದಿಲ್ಲವೆಂದು ನೇಮಕಾತಿ ಸಮಿತಿಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

ಬಿ) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.

ಸಿ) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ಅಂಕಪಟ್ಟಿ ಇಲ್ಲದೆ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.

## 7. <u>ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ:</u>

**ಎ) <u>ತರಬೇತಿ:</u>**

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಕರ್ನಾಟಕ ಪೊಲೀಸ್ ಅಕಾಡೆಮಿ, ಮೈಸೂರು ಅಥವಾ ಪೊಲೀಸ್ ತರಬೇತಿ ಕೇಂದ್ರ, ಗುಲ್ಬರ್ಗಾ ಅಥವಾ ಪೊಲೀಸ್ ಇಲಾಖೆಯು ತೀರ್ಮಾನಿಸಿದ ಇತರೆ ತರಬೇತಿ ಕೇಂದ್ರದಲ್ಲಿ ಹನ್ನೆರಡು ತಿಂಗಳ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿತ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು.

**ಬಿ) <u>ಖಾಯಂಪೂರ್ವ ಅವಧಿ:</u>**

ಮೂಲ ತರಬೇತಿ ಮತ್ತು ಪ್ರಾಯೋಗಿಕ ತರಬೇತಿ ಸೇರಿದಂತೆ ಎರಡು ವರ್ಷ ಆರು ತಿಂಗಳು.

**ಸಿ) <u>ವೇತನ ಶ್ರೇಣಿ:</u>**

`. 37900-950-39800-1100-46400-1250-53900-1450-65600-1650-70850

**ಡಿ) <u>ಪಿಂಚಣಿ ಸೌಲಭ್ಯ :</u>**

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ:31.03.2006 ರಂತೆ ನೂತನ ಅಂಶದಾಯಿ ಪಿಂಚಣಿ ಸೌಲಭ್ಯ ಅನ್ವಯವಾಗುವುದು.

**8. <u>ಸಹಿಷ್ಣುತೆ ಪರೀಕ್ಷೆ (Endurance Test) (ಇಟಿ) ಮತ್ತು ದೇಹದಾರ್ಢ್ಯತೆ ಪರೀಕ್ಷೆ(Physical Standard Test)(ಪಿಎಸ್‌ಟಿ) :</u>**

**ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಒಳಗೊಂಡ ಕರೆ ಪತ್ರಗಳನ್ನು ಪೊಲೀಸ್ ಇಲಾಖೆಯ ವೆಬ್‌ಸೈಟ್ "http://www.ksp.gov.in" ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಅಭ್ಯರ್ಥಿಯು ತನ್ನ ಕರೆ ಪತ್ರವನ್ನು ಪೊಲೀಸ್ಇಲಾಖೆಯ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಕರೆ ಪತ್ರಗಳನ್ನು ಅಂಚೆ ಮೂಲಕ ರವಾನಿಸಲಾಗುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್‌ನ್ನು ಮೇಲಿಂದ ಮೇಲೆ ವೀಕ್ಷಿಸುತ್ತಿರಬೇಕು. ಕರೆ ಪತ್ರವಿಲ್ಲದೆ ಹಾಜರಾಗುವ ಅಭ್ಯರ್ಥಿಗಳಿಗೆ ಇ.ಟಿ. ಮತ್ತು ಪಿ.ಎಸ್.ಟಿ. ಪರಿಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ.**

ಎ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಆಯ್ಕೆ ಸಮಿತಿಯು ನಿಗದಿಪಡಿಸಿದ ಕೇಂದ್ರಗಳಲ್ಲಿ ನಡೆಸಲಾಗುವುದು.** ಆಯ್ಕೆ ಸಮಿತಿಯು ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ ಇದನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು. ಎಲ್ಲಿಯೇ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ನಡೆಸಿದರೂ ಅಭ್ಯರ್ಥಿಗಳು ಸದರಿ ಪರೀಕ್ಷೆಗೆ ಹಾಜರಾಗತಕ್ಕದ್ದು, ಇಲ್ಲದಿದ್ದಲ್ಲಿ ಗೈರುಹಾಜರು/ಅನರ್ಹಗೊಳಿಸಲಾಗುವುದು.

ಬಿ) **ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿ ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾದರೆ, ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. (ವಿಶೇಷ ಸೂಚನೆಗಳು 18(ಸಿ)ನ್ನು ನೋಡಿ) ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

ಸಿ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ ಮತ್ತು ಸಮಯದ ಮಾಹಿತಿಯನ್ನು ಒಳಗೊಂಡ ಕರೆ ಪತ್ರಗಳನ್ನು ಅಧಿಕೃತ ವೆಬ್‌ಸೈಟ್ <u>www.ksp.gov.in</u>ನಲ್ಲಿ ಪ್ರಕಟಿಸಲಾಗುವುದರಿಂದ** ಅಭ್ಯರ್ಥಿಗಳು ಸದರಿ ವೆಬ್‌ಸೈಟ್‌ನಿಂದ ಕರೆ ಪತ್ರಗಳನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ <u>www.ksp.gov.in</u>ನ್ನು ದಿನನಿತ್ಯ ಗಮನಿಸುತ್ತಿರುವುದು ಸೂಕ್ತ. ದೈಹಿಕ ಪರೀಕ್ಷೆಯು ನಡೆಯುವ ಸಮಯ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರದ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆ ಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ.

ಅಭ್ಯರ್ಥಿಗಳು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಅದರ ಒಂದು ದೃಢೀಕೃತ ಪ್ರತಿಯನ್ನು ನೀಡುವುದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen’s pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

ಕರೆಪತ್ರದ ಜೊತೆಗೆ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

ಸಿ) **ಸಹಿಷ್ಣುತೆ ಪರೀಕ್ಷ: (Endurance Test)**

i) ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸದೆ ತಿರಸ್ಕರಿಸುವವರು/ ವಿಫಲವಾಗುವರು, ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತವೆ.

ii) ಅಭ್ಯರ್ಥಿಗಳು 1600 ಮೀಟರ್ ಓಟವನ್ನು 6 ನಿಮಿಷ 30 ಸೆಕೆಂಡ್‌ಗಳೊಳಗಾಗಿ ಹಾಗೂ ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳು 400 ಮೀಟರ್ ಓಟವನ್ನು 2 ನಿಮಿಷದೊಳಗಾಗಿ ಪೂರ್ಣಗೊಳಿಸಿದರೆ ಮಾತ್ರ ಮುಂದಿನ ಸಹಿಷ್ಣುತೆ ಪರೀಕ್ಷೆಗೆ ಅರ್ಹಗೊಳ್ಳುವರು. ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆ ಹಂತದಲ್ಲಿಯೇ ಅನರ್ಹಗೊಳಿಸಲಾಗುವುದು.

iii) ಸಹಿಷ್ಣುತೆ ಪರೀಕ್ಷೆಯಲ್ಲಿ ಎತ್ತರ ಜಿಗಿತ ಅಥವಾ ಉದ್ದ ಜಿಗಿತ ಹಾಗೂ ಗುಂಡೆಸತದಲ್ಲಿ ಮಾತ್ರ ಮೂರು ಅವಕಾಶಗಳನ್ನು ನೀಡಲಾಗುವುದು. ಮೂರು ಅವಕಾಶಗಳಲ್ಲಿ ಉತ್ತಮವಾದ ಒಂದನ್ನು ಮಾತ್ರ ಗಣನೆಗೆ ತೆಗೆದು ಕೊಳ್ಳಲಾಗುವುದು.

**ಎಲ್ಲಾ ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ (ಸೇವಾನಿರತ/ಮಾಜಿ ಸೈನಿಕರನ್ನು ಹೊರತುಪಡಿಸಿ)**

| ಅಂಶಗಳು | ಅರ್ಹತಾ ವೇಳೆ |
|---|---|
| 1600 ಮೀಟರ್ ಓಟ | 6 ನಿಮಿಷ 30 ಸೆಕೆಂಡ್ ಮೀರದಂತೆ |
| ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ)<br>ಅಥವಾ<br>1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

**ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಈ ಕೆಳಕಂಡ ಸಹಿಷ್ಣುತೆ ಪರೀಕ್ಷೆಯನ್ನು ನಡೆಸಲಾಗುವುದು**

| ಅಂಶಗಳು | ಅರ್ಹತಾ ವೇಳೆ |
|---|---|
| 400 ಮೀಟರ್ ಓಟ | 2 ನಿಮಿಷಮೀರದಂತೆ |
| ಉದ್ದ ಜಿಗಿತ<br>ಅಥವಾ<br>ಎತ್ತರ ಜಿಗಿತ | 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ)<br>ಅಥವಾ<br>0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

ಇ) **ದೇಹದಾರ್ಢ್ಯತೆ ಪರೀಕ್ಷೆ**: (ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ)

**ಎಲ್ಲಾ ನೇರ ಅಭ್ಯರ್ಥಿಗಳಿಗೆ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ**

ಎತ್ತರ : ಕನಿಷ್ಠ 168 ಸೆಂ.ಮೀ.

ಎದೆ ಸುತ್ತಳತೆ : 86 ಸೆಂ.ಮೀ. (ಪೂರ್ತಿ ವಿಸ್ತರಿಸಿದಾಗ) ಕನಿಷ್ಠವಿಸ್ತರಣೆ 5 ಸೆಂ.ಮೀ.

**ಟಿಪ್ಪಣಿ: ವೃಂದ ಮತ್ತು ನೇಮಕಾತಿ ನಿಯಮಾನುಸಾರ ನಿಗದಿಪಡಿಸಿರುವ ಕನಿಷ್ಟ ಎತ್ತರ 168 ಸೆಂ.ಮೀ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದಿರುವ ಪಕ್ಷದಲ್ಲಿ ಮಾತ್ರ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲು ಅವಕಾಶವಿರುವುದರಿಂದ ಅರ್ಜಿ ಸಲ್ಲಿಸಿರುವ ಎಲ್ಲಾ ಅರ್ಹ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅವಕಾಶ ಕಲ್ಪಿಸಲಾಗುವುದು.**

**ವಿಶೇಷ ಸೂಚನೆ :-**

**ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳಿಗೆ ಅಭ್ಯರ್ಥಿಗಳು ತಮ್ಮ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.**

**ಟಿಪ್ಪಣಿ :**

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ಇತರೆ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ಅಭ್ಯರ್ಥಿಗಳು ಮೇಲ್ಕಂಡ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಅರ್ಹರಾಗಿದ್ದರೂ ಸಹ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯು ಶಾರೀರಿಕವಾಗಿ ಸದೃಢರಾಗಿರಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ದೈಹಿಕ ನ್ಯೂನತೆಗಳನ್ನು / ಅಂಗವೈಕಲ್ಯಗಳನ್ನು ಹೊಂದಿರಬಾರದು.

iii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iv) ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

v) ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು.

vi) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ CCTV Camera ಗಳಲ್ಲಿ ಸೆರೆಹಿಡಿಯಲಾಗುವುದು.

## 9. ಲಿಖಿತ ಪರೀಕ್ಷೆ:

ಎ) **ಅಭ್ಯರ್ಥಿಯು ಸಹಿಷ್ಣುತೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು.** ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಆಯ್ಕೆ ಸಮಿತಿಯು ನಿಗದಿಪಡಿಸುವ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು. ಆಯ್ಕೆ ಸಮಿತಿಯು ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ.

ಬಿ) **ಅಭ್ಯರ್ಥಿಗಳು ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಹೊಂದಿರುವ** ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಖುದ್ದಾಗಿ ಯಾವುದೇ ಅಭ್ಯರ್ಥಿಗಳಿಗೆ ಕರೆ ಪತ್ರಗಳನ್ನು ಕಳುಹಿಸಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.inನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಲಿಖಿತ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ಲಿಖಿತ ಪರೀಕ್ಷೆಯ ಕೇಂದ್ರದ ಸೂಚನಾ ಫಲಕದಲ್ಲಿಯೂ

ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಹಾಜರಾಗುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್(Passport)

ii) ಚಾಲನಾ ಪರವಾನಗಿ ಪತ್ರ(Driving License)

iii) ಪ್ಯಾನ್ ಕಾರ್ಡ್(PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ(Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ(Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ(Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ(Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ(Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ.(Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

ಸಿ) **ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು:** i) ಲಿಖಿತ ಪರೀಕ್ಷೆಯ ಕರೆಪತ್ರ, ii) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಡಿ) **ಲಿಖಿತ ಪರೀಕ್ಷೆಯು ಪದವಿ ಮಟ್ಟದ ಎರಡು ಪತ್ರಿಕೆಗಳದ್ದಾಗಿರುತ್ತದೆ.**

**<u>ಪತ್ರಿಕೆ–1</u>** : ಈ ಪ್ರಶ್ನೆಪತ್ರಿಕೆಯಲ್ಲಿ ಪ್ರಬಂಧ ಬರಹ, ಸಾರಾಂಶ ಬರಹ, ಭಾಷಾಂತರ ಪ್ರಶ್ನೆಗಳು ಇರುತ್ತವೆ. ಪ್ರಬಂಧ ಬರಹದಲ್ಲಿ 600 ಶಬ್ದಗಳ ಮಿತಿಯನ್ನು ಮೀರಬಾರದು. ಪ್ರಬಂಧದ ಜೊತೆ ಸಾರಾಂಶ ಬರಹ (Precis) ಪ್ರಶ್ನೆಯನ್ನೂ ಕೊಡಲಾಗುವುದು. ಅಭ್ಯರ್ಥಿಗಳು ಕೊಡಲಾಗಿರುವ ಉತ್ತರ ಪತ್ರಿಕೆಯಲ್ಲಿ ಉತ್ತರಿಸತಕ್ಕದ್ದು ಹಾಗೂ ಅತಿರಿಕ್ತ ಉತ್ತರ ಪತ್ರಿಕೆಗಳನ್ನು ಕೊಡಲಾಗುವುದಿಲ್ಲ. ಈ ಪರೀಕ್ಷೆಯ ಅವಧಿ ಒಂದು ಗಂಟೆ ಮೂವತ್ತು ನಿಮಿಷಗಳಾಗಿದ್ದು, 50 ಅಂಕಗಳನ್ನು ಹೊಂದಿರುತ್ತದೆ. (20 ಅಂಕಗಳು ಪ್ರಬಂಧಕ್ಕೆ, 10 ಅಂಕಗಳು ಸಾರಾಂಶ ಬರಹಕ್ಕೆ ಹಾಗೂ 20 ಅಂಕಗಳು ಕನ್ನಡದಿಂದ ಇಂಗ್ಲೀಷ್‌ಗೆ ಮತ್ತು ಇಂಗ್ಲೀಷ್‌ನಿಂದ ಕನ್ನಡ ಭಾಷಾಂತರಕ್ಕೆ) ಇದರಲ್ಲಿ ಕನಿಷ್ಟ ಅಂಕಗಳು ಇರುವುದಿಲ್ಲ.

**<u>ಪತ್ರಿಕೆ–2</u>** : ಈ ಪ್ರಶ್ನೆಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿದ್ದು, 150 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple Choice) ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಇವುಗಳನ್ನು ಉತ್ತರಿಸಲು ಒಂದು ಗಂಟೆ ಮೂವತ್ತು ನಿಮಿಷ ಸಮಯ ನೀಡಲಾಗುತ್ತದೆ. ಈ ಪ್ರಶ್ನೆ ಪತ್ರಿಕೆಯಲ್ಲಿ ಅಭ್ಯರ್ಥಿಯ ಮಾನಸಿಕ ಸಾಮರ್ಥ್ಯವನ್ನು ಅಳೆಯಲಾಗುವುದು. ಪ್ರಶ್ನೆ ಪತ್ತಿಕೆಯಲ್ಲಿ ಪ್ರಚಲಿತ ವಿದ್ಯಮಾನಗಳು, ಸಾಮಾನ್ಯ ಜ್ಞಾನವನ್ನೊಳಗೊಂಡ ಸಾಮಾನ್ಯ ಅಧ್ಯಯನ, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಭಾರತೀಯ ಸಂವಿಧಾನ, ಇತಿಹಾಸ, ಭೂಗೋಳ, ವಿಜ್ಞಾನ, ಕಲೆ, ಸಾಹಿತ್ಯ, ಮಾನಸಿಕ ಸಾಮರ್ಥ್ಯ ಮತ್ತು ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತವೆ. ಪ್ರತಿ ತಪ್ಪು ಉತ್ತರಕ್ಕೆ ಅಂತಹುದೇ ಪ್ರಶ್ನೆಯ ಸರಿ ಉತ್ತರದ 25% (.375) ರಷ್ಟು ಅಂಕಗಳನ್ನು ಕಳೆಯಲಾಗುವುದು. ಅಭ್ಯರ್ಥಿಗಳು ಎರಡು ಪತ್ರಿಕೆಗಳಿಗೂ ಹಾಜರಾಗುವುದು ಕಡ್ಡಾಯವಾಗಿರುತ್ತದೆ.

**<u>ಸೂಚನೆಗಳು:</u>**

i) ಅಭ್ಯರ್ಥಿಗಳು ಪತ್ರಿಕೆ–1 ರಲ್ಲಿನ ಪ್ರಬಂಧ ಬರಹವನ್ನು ಇಂಗ್ಲೀಷ್ ಅಥವಾ ಕನ್ನಡದಲ್ಲಿ ಉತ್ತರಿಸಬಹುದು.

ii) ಪತ್ರಿಕೆ–1ರ ಉತ್ತರ ಪತ್ರಿಕೆಗಳನ್ನು ಗಣಕೀಕೃತ ಹಾಗೂ ದ್ವಿತೀಯ/ತೃತೀಯ ಮೌಲ್ಯಮಾಪನ ಮಾಡಲಾಗುವುದು. ಸದರಿ ಪ್ರಕ್ರಿಯೆಯನ್ನು ನಡೆಸುವ ಕುರಿತು ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ / ಅಧ್ಯಕ್ಷರವರ ತೀರ್ಮಾನವೇ ಅಂತಿಮವಾಗಿರುತ್ತದೆ.

iii) ಪ್ರಶ್ನೆ ಪತ್ರಿಕೆ–2 ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದ್ದಾಗಿರುತ್ತದೆ.

iv) ಪ್ರಶ್ನೆ ಪತ್ರಿಕೆ–2ರ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು/ ನೀಲಿ** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಅಭ್ಯರ್ಥಿಯು ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ), ಅರ್ಜಿ ಸಂಖ್ಯೆ. ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ಮಾಡಬೇಕು. ಇದನ್ನು ಭರ್ತಿ ಮಾಡದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿಯು ಆಯ್ಕೆಗೆ ಅನರ್ಹನಾಗುತ್ತಾನೆ. ಆದ್ದರಿಂದ ಅಭ್ಯರ್ಥಿಯು ಸರಿಯಾಗಿ ಮಾಹಿತಿಯನ್ನು ಭರ್ತಿ ಮಾಡಬೇಕು.

v) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು ಇಲ್ಲವಾದಲ್ಲಿ ಅಂತಹ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ.

vi) ಅರ್ಜಿ ಸಂಖ್ಯೆ, ರೋಲ್ ನಂ, ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಉತ್ತರ ಪತ್ರಿಕೆಗಳಲ್ಲಿ ಭರ್ತಿ ಮಾಡದೆ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿ ಮನವಿ ಸಲ್ಲಿಸಿದಲ್ಲಿ ಅಂತಹ ಮನವಿಯನ್ನು ಪರಿಗಣಿಸಲಾಗುವುದಿಲ್ಲ.

vii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ, ಸಹಿ, ಎಡಗೈ ಹೆಬ್ಬೆಟ್ಟಿನ ಗುರುತು ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

viii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

ix) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನು / ಟ್ಯಾಬಲೆಟ್ / ಐ–ಪೋಡ್‌ಗಳನ್ನು ನಿಷೇಧಿಸಲಾಗಿದೆ. ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.ಪರೀಕ್ಷೆ ಬರೆಯುವಾಗ ಮೇಲಿನ ಯಾವುದೇ ವಸ್ತುಗಳನ್ನು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

x) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ/ಸಂದೇಹ ಉಂಟಾದಲ್ಲಿ ಕನ್ನಡ/ಇಂಗ್ಲೀಷ್ ಭಾಗವನ್ನು ನೋಡುವುದು. ಪ್ರಶ್ನೆ ಪತ್ರಿಕೆಯಲ್ಲಿ ಯಾವುದಾದರೂ ದೋಷ ಅಂದರೆ ಮುದ್ರಣ ದೋಷ, ಪುಟಗಳ ಅದಲು ಬದಲು, ಪ್ರಶ್ನೆಗಳ ಪುನರಾವರ್ತನೆ, ಯಾವುದಾದರೂ ಪುಟಗಳು ಇಲ್ಲದಿದ್ದಲ್ಲಿ ಮತ್ತು ಇನ್ನಾವುದೇ ದೋಷ ಕಂಡು ಬಂದಲ್ಲಿ ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಸಮಿತಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡು ಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

## 10. <u>ಮೌಖಿಕ ಪರೀಕ್ಷೆ</u> :

ಎ) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನುಸಾರ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಸದರಿ ಅರ್ಹತಾ ಪಟ್ಟಿಯಿಂದ ಪ್ರತಿ ಹುದ್ದೆಗೆ 1:2ರ ಪ್ರಮಾಣದಲ್ಲಿ ಪ್ರತಿ ಗುಂಪು/ಪ್ರವರ್ಗಗಳನುಸಾರ 10 (ಹತ್ತು) ಅಂಕಗಳುಳ್ಳ ಮೌಖಿಕ ಪರೀಕ್ಷೆ / ವ್ಯಕ್ತಿತ್ವ ಪರೀಕ್ಷೆಗೆ ಕರೆಯಲಾಗುವುದು. ಅಭ್ಯರ್ಥಿಗಳು ಬೆಂಗಳೂರಿನ ನೇಮಕಾತಿ ಸಮಿತಿಯ ಮುಂದೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕಾಗುತ್ತದೆ ಮತ್ತು ಜನ್ಮ ದಿನಾಂಕದ, ವಿದ್ಯಾರ್ಹತೆಯ ಹಾಗೂ ಕೋರಲಾದ ಮೀಸಲಾತಿ ಪ್ರಮಾಣ ಪತ್ರಗಳ ಎರಡು ಸೆಟ್‌ನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಿಸಿಕೊಂಡು ತರಬೇಕಾಗಿರುತ್ತದೆ. ಈ ಮೌಖಿಕ ಪರೀಕ್ಷೆಗೆ ಕನಿಷ್ಠ ಅಂಕಗಳು ಇರುವುದಿಲ್ಲ. ಮೌಖಿಕ ಪರೀಕ್ಷೆಗೆ ಹಾಜರಾಗದಿರುವ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುವರು ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಒಳಗೊಂಡ ಕರೆ ಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.inನಿಂದ ಪಡೆದುಕೊಳ್ಳಬೇಕು (Download). ಮೌಖಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಡಿಐಜಿಪಿ, ನೇಮಕಾತಿ, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಗೆ

ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್(Passport)

ii) ಚಾಲನಾ ಪರವಾನಗಿ ಪತ್ರ(Driving License)

iii) ಪ್ಯಾನ್ ಕಾರ್ಡ್(PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ(Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ(Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ(Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ(Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ(Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ.(Job cards with Photograph)

x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

ಬಿ) **ಮೌಖಿಕ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು**: i) ಮೌಖಿಕಪರೀಕ್ಷೆಯ ಕರೆಪತ್ರ ii) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ iv) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ, v) ಎಸ್‌ಎಸ್‌ಎಲ್‌ಸಿ ಮತ್ತು ಪದವಿ ಅಂಕಪಟ್ಟಿಗಳು / ಪದವಿ ಪ್ರಮಾಣ ಪತ್ರ, vi) ಸಂಬಂಧಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತರತಕ್ಕದ್ದು. ತಪ್ಪಿದ್ದಲ್ಲಿ ಮೌಖಿಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

**ಟಿಪ್ಪಣಿ**: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿರುವ ಹುದ್ದೆಗಳಿಗೆ ನಿಯಮಾನುಸಾರ ಕನಿಷ್ಠ 168 ಸೆಂ.ಮೀ. ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಿ ಆಯ್ಕೆಗೆ ಪರಿಗಣಿಸಲಾಗುವುದು. ನಂತರ ಮೀಸಲಿರಿಸಿದ ಹುದ್ದೆಗಳು ಖಾಲಿಯಿದ್ದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಅರ್ಹತೆಯನುಸಾರ ಆಯ್ಕೆಗೆ ಪರಿಗಣಿಸಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

ಸಿ) ನಿಯಮಾನುಸಾರ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವಾದ 05.08.2019ಕ್ಕೆ ಮುಂಚಿತವಾಗಿ ಜಾತಿ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರವನ್ನು ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳು ಪಡೆದಿಟ್ಟುಕೊಂಡಿರತಕ್ಕದ್ದು.

## 11. ವೈದ್ಯಕೀಯ ಪರೀಕ್ಷೆ :

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಗೆ ಹಾಜರಾಗತಕ್ಕದ್ದು, ವೈದ್ಯಕೀಯ ಪರೀಕ್ಷೆಯ ಸಮಯ ಮತ್ತು ಸ್ಥಳವನ್ನು ಆಯ್ಕೆ ಪ್ರಾಧಿಕಾರವು ನಿಗದಿಪಡಿಸುವುದು.

**ವೈದ್ಯಕೀಯ ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ :**

(ಎ) **ದೃಷ್ಟಿ:**
ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

| | ಉತ್ತಮ | | ಕನಿಷ್ಠ |
|---|---|---|---|
| (i) ದೂರದ ದೃಷ್ಟಿ | 6/9 | ಅಥವಾ | 6/9 |
| | 6/9 | | 6/12 |
| (ii) ಸಮೀಪದ ದೃಷ್ಟಿ | 0/6 | | 0/8 |

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

(ಬಿ) <u>**ಶ್ರವಣ ಶಕ್ತಿ:**</u>

i) ರಿನ್ನೇಸ್ ಪರೀಕ್ಷೆ(Rinne's Test) ii) ವೆಬ್ಬರ್ ಪರೀಕ್ಷೆ (Weber's Test)

iii) ವೆರ್ಟಿಗೋ ಪರೀಕ್ಷೆ (Tests for Vertigo)

ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

(ಸಿ) ಅಪಧಮನಿ ಊತ ಸಹ ಅನರ್ಹತೆ(Varicose Veins)

(ಡಿ) ಮಾತಿನಲ್ಲಿ ಅಡಚಣೆ ಸಹ ಅನರ್ಹತೆ (Impediment in speech)

(ಇ) ಎದೆಯ ಕ್ಷ-ಕಿರಣ (Chest X-Ray)ವನ್ನು ಪರೀಕ್ಷೆಗೆ ತೆಗೆದುಕೊಳ್ಳಲಾಗುವುದು.

ಮೇಲಿನ ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯು ನಡೆಸುತ್ತದೆ. ಸದರಿ ಮಂಡಳಿಯು ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹಗೊಳ್ಳುವರು.

<u>ಟಿಪ್ಪಣಿ</u> : ಸಹಿಷ್ಣುತೆ ಪರೀಕ್ಷೆ, ಲಿಖಿತ ಪರೀಕ್ಷೆ, ಮೌಖಿಕ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

## 12. <u>ಜಾತಿ ಮೀಸಲಾತಿ ಪ್ರಮಾಣ ಪತ್ರಗಳು</u> :

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ-ಡಿ ಪ್ರಮಾಣ ಪತ್ರ.

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ-ಇ ಪ್ರಮಾಣ ಪತ್ರ.

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರ.

<u>**ಸೂಚನೆ**</u> : ನಮೂನೆ – ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:05.08.2019ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

## 13. <u>ಗ್ರಾಮೀಣ ಮೀಸಲಾತಿ:</u>

ಎ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, **ಮತ್ತು**

ಬಿ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು **ವ್ಯಾಸಂಗ ಮಾಡಿದ ಅವಧಿಯಲ್ಲಿ** ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, **ಮತ್ತು**

ಸಿ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ. ಸಿಆಸುಇ:08:ಸೆನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೆನೆನಿ/2005, ದಿನಾಂಕ 10.08.2005 ರಲ್ಲಿ ನಿಗದಿಪಡಿಸಿದ ನಮೂನೆ-2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆಯುವುದು. ನಮೂನೆ-1 (ನಾನ್-ಕ್ರೀಮಿ ಲೇಯರ್) ಮತ್ತು ನಮೂನೆ-2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ).

ಡಿ) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ–2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

**ಸೂಚನೆ:** ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

## 14. ಯೋಜನಾ ನಿರಾಶ್ರಿತರು:

ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ. ಡಿಪಿಎಆರ್:23:ಎಸ್‌ಆರ್‌ಆರ್:99, ದಿನಾಂಕ 23.11.2000 ರನ್ವಯ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಸರ್ಕಾರದ ಸುತ್ತೋಲೆ ಸಂಖ್ಯೆ. ಸಿಆಸುಇ:44: ಸೇನೆನಿ:2001, ದಿನಾಂಕ 27.07.2001ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

**15. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ :** ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಯೋಜನೆ ಹೊಂದಿದ ಬಗೆಗಿನ ಪ್ರಮಾಣ ಪತ್ರ/ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

## 16. ಕನ್ನಡ ಮಾಧ್ಯಮ:

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ. ಆದರೆ ಈ ಮೇಲಿನ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

## 17. ಪ್ರಮುಖವಾದ ಸೂಚನೆಗಳು :

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿದ್ದು, ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

ಎ) ವಿದ್ಯಾರ್ಹತೆಯ ಅಂಕಪಟ್ಟಿ.

ಬಿ) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ)

ಸಿ) ಸರ್ಕಾರಿ ಇಲಾಖೆಯಲ್ಲಿ/ರಾಜ್ಯಸರ್ಕಾರದ/ಕೇಂದ್ರ ಸರ್ಕಾರದ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.

ಡಿ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಇ) ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.

ಎಫ್) ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಯೋಜನೆ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).

ಜಿ) ಮಾಜಿ ಸೈನಿಕ ಮಕ್ಕಳು ಮೀಸಲಾತಿ ಪಡೆಯುವ ಅಭ್ಯರ್ಥಿಗಳು ಅವರ ತಂದೆಯವರು ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

ಹೆಚ್) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.

ಐ) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿಟ್ಟು ಕೊಂಡಿರತಕ್ಕದ್ದು.

ಜೆ) ಸೇವೆಯಲ್ಲಿರುವ ಎಎಸ್ಐ / ಹೆಚ್‌ಸಿ/ ಪಿಸಿ ರವರುಗಳು ಅಧಿಸೂಚನೆಯಲ್ಲಿ ನೀಡಲಾಗಿರುವ ಅನುಬಂಧ–'ಎ' & 'ಬಿ' ಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಕೆ) ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು. ಭರ್ತಿ ಮಾಡಿ ಸಲ್ಲಿಸಿದಂತಹ ಅರ್ಜಿಯಲ್ಲಿನ ಅಂಶ/ಮಾಹಿತಿಗಳನ್ನು ಯಾವುದೇ ಸಂದರ್ಭದಲ್ಲಿ ಬದಲಾವಣೆ ಮಾಡಲಾಗುವುದಿಲ್ಲ.

ಎಲ್) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಸಂಬಂಧಪಟ್ಟ ಘಟಕಾಧಿಕಾರಿ ರವರ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಎಂ) ಅಭ್ಯರ್ಥಿಗಳು ನೇಮಕಾತಿ ಸಮಿತಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿಯೊಂದಿಗೆ ಅರ್ಜಿಯ ನಕಲು ಪ್ರತಿಯನ್ನು ಹಾಗೂ ಇತರೆ ಮಾಹಿತಿಯನ್ನು ನೀಡತಕ್ಕದ್ದು.

ಎನ್) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಯಾವುದೇ ಸುಳ್ಳು/ತಪ್ಪು ಮಾಹಿತಿಗಳನ್ನು ನೀಡಬಾರದು. ಹಾಗೇ ನೀಡಿ ತದನಂತರ ನೇಮಕಾತಿ ಸಮಿತಿಗೆ ಅದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು.

ಓ) ಅರ್ಜಿದಾರರು ಯಾವುದೇ ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು. ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ / ಖುಲಾಸೆಯಾಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.

## 18. ವಿಶೇಷ ಸೂಚನೆಗಳು:

ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಈ ಕೆಳಕಂಡ ವಿಶೇಷ ಸೂಚನೆಗಳನ್ನು ಗಮನಿಸುವುದು.

ಎ) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

ಬಿ) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಕಾಲಂನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

ಸಿ) **ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದೆಂದು ಸಲಹೆ ನೀಡಲಾಗಿದೆ. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸುವ ಬದಲು ಒಂದೇ ಅರ್ಜಿಯನ್ನು ಅತೀ ಜಾಗರೂಕತೆಯಿಂದ ಮತ್ತು ಬಹಳ ಎಚ್ಚರಿಕೆಯಿಂದ ಭರ್ತಿ ಮಾಡತಕ್ಕದ್ದು, ಏಕೆಂದರೆ ಒಂದಕ್ಕಿಂತ ಹೆಚ್ಚು ನೋಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಸಂಕ್ಷಿಪ್ತವಾಗಿ ತಿಳಿಸುವುದೇನೆಂದರೆ ಒಬ್ಬ ಅಭ್ಯರ್ಥಿಯು ಒಂದು ನೋಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇ ಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಪೋಟೋಗಳನ್ನು ಅಂಟಿಸಿ, ಸಹಿಗಳನ್ನು ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

ಡಿ) **ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ**. ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

ಇ) ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ(ಪದವಿ ಅಥವಾ ತತ್ಸಮಾನ)ಯನ್ನು ಹೊಂದಿರಬೇಕು.

ಎಫ್) ಅಭ್ಯರ್ಥಿಗಳು ಅರ್ಜಿಯಲ್ಲಿ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ. ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ. ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳನ್ನು ಸರಿಯಾಗಿ ನಮೂದಿಸತಕ್ಕದ್ದು.

ಜಿ) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ/ಬಂದ್ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 05.08.2019 ಮಾತ್ರ ಅನ್ವಯವಾಗುತ್ತದೆ.

ಹೆಚ್) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

ಐ) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.inನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

ಜೆ) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ತಯಾರು (Upload) ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದಮತ್ತು ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಕೆ) ಪರೀಕ್ಷೆಗೆ ಪ್ರವೇಶವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.

ಎಲ್) ಪ್ರಶ್ನೆ ಪತ್ರಿಕೆಯಲ್ಲಿ ಯಾವುದಾದರೂ ಮುದ್ರಣ ದೋಷವಾಗಿದ್ದಲ್ಲಿ ಅದನ್ನು ತಕ್ಷಣ ಕೊಠಡಿಯ ಪರಿವೀಕ್ಷಕರ ಗಮನಕ್ಕೆ ತಂದು ಸರಿಯಾದ ಪ್ರಶ್ನೆ ಪತ್ರಿಕೆ ಪಡೆದುಕೊಂಡು ಉತ್ತರವನ್ನು ಬರೆಯಬೇಕು. ಇದರ ಬಗ್ಗೆ ಪರೀಕ್ಷೆ ಮುಗಿದ ನಂತರ ನೇಮಕಾತಿ ಸಮಿತಿಗೆ ಸದರಿ ವಿಷಯದ ಬಗ್ಗೆ ತಿಳಿಸಿದ್ದಲ್ಲಿ ಅದನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಎಂ) ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗ ಸೂಚನೆಗಳನ್ನು ನೀಡುತ್ತಾರೆ.

ಎನ್) ಪರೀಕ್ಷೆ ಮುಗಿದ ಒಂದು ಅಥವ ಎರಡು ದಿನಗಳ ನಂತರ ತಾತ್ಕಾಲಿಕ ಕೀ ಉತ್ತರಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದಲ್ಲಿ ಅದಕ್ಕೆ ಒಂದು ವಾರದ ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆಗಳು ಬಂದ ನಂತರ ಅದನ್ನು ಒಂದು ತಜ್ಞರ ಸಮಿತಿಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು ಅಂತಿಮ ಕೀ ಉತ್ತರಗಳನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಕೀ ಉತ್ತರಗಳ ಪ್ರಕಾರ ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು.

ಓ) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

ಪಿ) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ / ದಾಖಲೆಗಳನ್ನು ಸಲ್ಲಿಸಿ ನೌಕರಿ ಪಡೆಯುವುದು/ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ದ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

ಕ್ಯೂ) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

ಆರ್) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977 ಹಾಗೂ ಸದರಿ ನಿಯಮಕ್ಕೆ ಆಗಿರುವ ತಿದ್ದುಪಡಿ ಹಾಗೂ ವೃಂದ ಮತ್ತು ನೇಮಕಾತಿ (ತಿದ್ದುಪಡಿ) ನಿಯಮ 2009ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ. ನಿಯಮದಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪರೀಕ್ಷೆಯಲ್ಲಿ ವಿಫಲರಾದ ಅಭ್ಯರ್ಥಿಗಳನ್ನು ಅನರ್ಹ ಗೊಳಿಸಲಾಗುವುದು ಹಾಗೂ ಇತರೆ ಯಾವುದೇ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

ಎಸ್) **<u>ದುರ್ನಡತೆ</u>** : ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ಳು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

ಎಸ್) **<u>ದುರ್ನಡತೆ</u>**: ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ಳು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

ಟಿ) ಅಭ್ಯರ್ಥಿಗಳು ಆರ್‌ಎಸ್‌ಐ (ಸಿಎಆರ್/ಡಿಎಆರ್) (ಪುರುಷ)– 2019–20 ನೇಮಕಾತಿ ಸಹಾಯವಾಣಿ ಸಂಖ್ಯೆ. 080–22943346ನ್ನು ಸಂಪರ್ಕಿಸಿ ನೇಮಕಾತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸ್ಪಷ್ಟಪಡಿಸಿಕೊಳ್ಳಬಹುದು. ಈ ಸಹಾಯವಾಣಿ ದಿನಾಂಕ:15.07.2019 ರಿಂದ ಪ್ರತಿದಿನ ಬೆಳಿಗ್ಗೆ 10–00 ರಿಂದ ಸಾಯಂಕಾಲ 6–00 ಗಂಟೆಯವರೆಗೆ ಲಭ್ಯವಿರುತ್ತದೆ. ಅಲ್ಲದೆ ಮೇಲಿಂದ ಮೇಲೆ ನೇಮಕಾತಿಗೆ ಸಂಬಂಧಪಟ್ಟಂತೆ ಬರುವ ಸಾಮಾನ್ಯ ಪ್ರಶ್ನೆಗಳಿಗೆ (Frequenty Asked Questions - FAQ) ಉತ್ತರವನ್ನು <u>www.ksp.gov.in</u>ಪೊಲೀಸ್ ವೆಬ್‌ಸೈಟ್‌ನಲ್ಲಿ ನೋಡಬಹುದು.

ಸಹಿ/–
ಡೈರೆಕ್ಟರ್ ಜನರಲ್ ಆಫ್ ಪೊಲೀಸ್
ಮತ್ತು ಸಿ&ಎಂಡಿ, ಕೆಎಸ್‌ಪಿಹೆಚ್ ಹಾಗೂ
ಎಡಿಜಿಪಿ, ನೇಮಕಾತಿ (ಪ್ರಭಾರ), ಬೆಂಗಳೂರು.

**(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಡಿ**

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

................................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................. ಜಿಲ್ಲೆಯ/ ವಿಭಾಗದ ............................................. ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................................ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* ........................................................................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ....................................................................................... ರಾಜ್ಯ / ಕೇಂದ್ರಾಡಳಿತ ಪ್ರದೇಶದ ............................................... ಜಿಲ್ಲಾ / ವಿಭಾಗದ ........................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ ..................................................

ತಹಶೀಲ್ದಾರರು ..................................................

ಸ್ಥಳ : ಪದನಾಮ

ದಿನಾಂಕ : ಕಛೇರಿಯ ಮೊಹರಿನೊಂದಿಗೆ

**ರಾಜ್ಯ / ಕೇಂದ್ರಾಡಳಿತ ಪ್ರದೇಶ***

**ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

ಸೂಚನೆ : ಇಲ್ಲಿ ಉಪಯೋಗಿಸಿದ **"ಸಾಮಾನ್ಯ ನಿವಾಸಿಗಳೂ"** ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ**

.......................................................................................................................... ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ....................................................................................................... ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ............................................................................................................ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ..................................................................... ಜಾತಿಯ ............................................. ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : ............................ ತಾಲ್ಲೂಕು

ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

................................................................... ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ................................................. ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ........................................ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 11400–21600/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎಂಟು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ .................................. ಇವರು ....................................... ಜಾತಿಗೆ ......................................... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ............................... (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರರು

ದಿನಾಂಕ : ............................ ತಾಲ್ಲೂಕು

ಕಛೇರಿಯ ಮೊಹರು

**ನಮೂನೆ–1**

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**
(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು,
..................... ತಾಲ್ಲೂಕು,
..................... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ...................................................... ಎಂಬುವವರ ಮಗ/ಮಗಳು/ಪತಿ/ಪತ್ನಿ.............................. ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :

   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ
ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ
ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ.............................................................................. ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ ................................ ಜಿಲ್ಲೆಯ ವಿಭಾಗ ............................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ........................................................ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ......................... ತಾಲ್ಲೂಕು
ಕಛೇರಿಯ ಮೊಹರು

**ಸೂಚನೆ–1**: ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.
**ಸೂಚನೆ–2**: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

**ನಮೂನೆ – 2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ........................................................................ ರವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ ................................................ ಜಿಲ್ಲೆ ............................. ತಾಲ್ಲೂಕು ............................... ಗ್ರಾಮದಲ್ಲಿ .......................... ವಾಸವಾಗಿರುವ ಇವರು ಒಂದನೇ ತರಗತಿಯಿಂದ ................................. ತರಗತಿಯವರೆಗೆ ...................................... ಜಿಲ್ಲೆ .................................. ತಾಲ್ಲೂಕು ............................... ಪಟ್ಟಣ ................................................ ಶಾಲೆಯಲ್ಲಿ ವ್ಯಾಸಂಗ ಮಾಡಿ ................................. ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ :                                                ಮುಖ್ಯೋಪಾಧ್ಯಾಯರ ಸಹಿ
ದಿನಾಂಕ :                                          ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು
ಕ್ಷೇತ್ರ ಶಿಕ್ಷಣಾಧಿಕಾರಿ

**ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ............................................................................................ ರವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾರಿ ................................................ ಜಿಲ್ಲೆ ............................. ತಾಲ್ಲೂಕು ............................... ಗ್ರಾಮದಲ್ಲಿ ...................... ವಾಸವಾಗಿರುವ ಇವರು ................................... ನೇ ತರಗತಿಯಿಂದ ............................................ ನೇ ತರಗತಿಯವರೆಗೆ .............................. ಶೈಕ್ಷಣಿಕ ವರ್ಷದಿಂದ .............................. ಶೈಕ್ಷಣಿಕ ವರ್ಷದವರೆಗೆ.............................. ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :                                                ಮುಖ್ಯೋಪಾಧ್ಯಾಯರ ಸಹಿ
ದಿನಾಂಕ :                                          ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲು ರುಜು
ಕ್ಷೇತ್ರ ಶಿಕ್ಷಣಾಧಿಕಾರಿ, ಕಛೇರಿಯ ಮೊಹರು

ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 44 ಸೇನೆನಿ 2001 ದಿನಾಂಕ 27-07-2001

**ನಮೂನೆ-3**

**ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ**

ಶ್ರೀ/ಶ್ರೀಮತಿ ........................................................................................ ಎಂಬುವವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾರಿ ................................................... ಜಿಲ್ಲೆ ............................... ತಾಲ್ಲೂಕು ............................... ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ............................................................ ಯೋಜನೆಗಾಗಿ ............................... ಇಸವಿಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ :-

(i) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು.

(ii) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ : ಯೋಜನೆಯಿಂದ ತಾವು ವಾಸಿಸುವ ಮನೆ :

(iii) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ :

(iv) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ : ಸಹಿ/- ತಹಶೀಲ್ದಾರರು

ದಿನಾಂಕ : ......................... ತಾಲ್ಲೂಕು, ಕಛೇರಿಯ ಮೊಹರು

(** ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.)

ANNEXURE-4

GOVERNMENT OF KARNATAKA DEPARTMENT OF SAINIK WELFARE AND RESETTLEMENT

Office of the Deputy Director
Department of Sainik Welfare & Resettlement
(Karnataka)

No. Date:

CERTIFICATE

This is to certify that Shri/Ssmt/Kum....................................................is an applicant for ................................in Karnataka is the spouse/son/daughter of No......................Rank........... Name .......................................................who died/was permanently disabled while in service according to the certificate issued by Defense Authority. He died/was permanently disabled on .....................

Home address of the individual at the time of joining Defense Service as per the records is:
..................................................................
......................................................................

Place: Signature of the Deputy Director
Date: Department of Sainik Welfare & Resettlement
District ....................................

ಸೇವಾನಿರತ ಅಭ್ಯರ್ಥಿಗಳಿಗೆ ಮಾತ್ರ/**Only for In-service candidates**

ಅನುಬಂಧ –'ಎ' / **ANNEXURE – 'A'**

ಪ್ರಮಾಣ ಪತ್ರ / **CERTIFICATE**

ಅರ್ಜಿದಾರನು ಎಲ್ಲಾ ಅರ್ಹತಾ ಮಾನದಂಡಗಳನ್ನು ಪೂರೈಸಿರುವುದನ್ನು ಮತ್ತು ವಾಸ್ತವಾಂಶಗಳು ಆತನ ಸೇವಾ ದಾಖಲೆಗಳಿಗೆ ಹೊಂದಾಣಿಕೆಯಾಗಿರುವುದನ್ನು ಪರಿಶೀಲಿಸಲಾಗಿದೆ. ಈ ಕೆಳಕಂಡ ತಪಾಸಣಾ ಪಟ್ಟಿಯನ್ನು ಕೆಳಗೆ ಸಹಿ ಮಾಡಿರುವವರು ಖುದ್ದಾಗಿ ಪರಿಶೀಲಿಸಿದ್ದಾರೆ.

Verified that the applicant fulfills all eligibility criteria and facts have been tallied from his service records. The check list below has been personally verified by the undersigned.

I (ಎ) ಅಭ್ಯರ್ಥಿಯ ಪೂರ್ಣ ಹೆಸರು ________________ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ ________________ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ ________________.

(a) The Candidate's Full Name ________________. Present post of the candidate ________________ and working place of the candidate ________________.

(ಬಿ) ಅಭ್ಯರ್ಥಿಯ ಜನ್ಮ ದಿನಾಂಕವು ದಾಖಲೆಗಳನುಸಾರ ________________ ಆಗಿರುತ್ತದೆ. ಆತನ ವಯಸ್ಸು 05.08.2019ಕ್ಕೆ ________________ ಇರುತ್ತದೆ.

(b) The Candidate's Date of Birth, as per record is ________________. His age as on 05.08.2019 is ________________ .

(ಸಿ) ಅಭ್ಯರ್ಥಿಯು 05.08.2019ಕ್ಕೆ ಪದವೀಧರನಾಗಿದ್ದಾನೆ. ಅವನು ____________ ವಿಶ್ವವಿದ್ಯಾಲಯದಿಂದ ____________ ವರ್ಷದಲ್ಲಿ ________________ ಪರೀಕ್ಷೆಯಲ್ಲಿ ಉತ್ತೀರ್ಣನಾಗಿದ್ದಾನೆ.

(c) The candidate is a Graduate as on 05.08.2019. He has passed ________________ Examination from ______________University in the year ___________ .

(ಡಿ) ಅಭ್ಯರ್ಥಿಯು ದಾಖಲೆ/ಪ್ರಮಾಣ ಪತ್ರಕ್ಕನುಸಾರವಾಗಿ ________________ ಜಾತಿ/ಸಮುದಾಯ/ಪ್ರವರ್ಗಕ್ಕೆ ಸೇರಿದ್ದಾನೆ.

(d) The candidate belongs to _______________ Caste/Group/Category as per Service record/Certificate.

(ಇ) ಅಭ್ಯರ್ಥಿಯು ________________ ರಂದು ಪೊಲೀಸ್ ಇಲಾಖೆಗೆ ಸೇರಿದ್ದಾನೆ. ದಿನಾಂಕ: 05.08.2019ಕ್ಕೆ ಸಹಾಯಕ ಉಪ ಪೊಲೀಸ್ ನಿರೀಕ್ಷಕರು/ಮುಖ್ಯ ಪೇದೆ/ಪೊಲೀಸ್ ಪೇದೆ ಆಗಿ ಆತನ ಸೇವಾವಧಿಯು ________________ ವರ್ಷ__________ ತಿಂಗಳು ___________ ದಿನಗಳಾಗಿರುತ್ತದೆ.

(e) The candidate has joined the Police Department on ________________. His length of Service as ASI/HC/PC as on 05.08.2019 is ________Years ______Months ______Days.

II ಕಡತ ಲಭ್ಯವಿಲ್ಲದ ಅಥವಾ ಇತರ ಕಾರಣಗಳಿಗಾಗಿ ಕೆಳಕಂಡ ಅಂಶಗಳನ್ನು ಪರಿಶೀಲಿಸಲಾಗಿಲ್ಲ.

For lack of records or otherwise. I am unable to verify the following.

a. ಇಲಾಖಾ ವಿಚಾರಣೆ / Departmental Enquiry.

b. ಅಪರಾಧಗಳಲ್ಲಿ ತೊಡಗಿರುವುದು/ Involvement in Criminal Cases.

c. ಜಾತಿ/ಸಮುದಾಯ/ಪ್ರವರ್ಗ Caste/Group/Category

ಪೊಲೀಸ್ ಸೂಪರಿಂಟೆಂಡೆಂಟ್/ಘಟಕಾಧಿಕಾರಿ

Superintendent of Police/Unit Officer
(with Office Seal)

ಸೇವಾನಿರತ ಅಭ್ಯರ್ಥಿಗಳಿಗೆ ಮಾತ್ರ/**Only for In-service candidates**

ಅನುಬಂಧ –'ಬಿ' / **ANNEXURE – 'B'**

## ಘೋಷಣೆ / DECLARATION

ನಾನು ಸೇವಾನಿರತ ಸಶಸ್ತ್ರ ಮೀಸಲು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಪುರುಷ) ಹುದ್ದೆಯ ನೇಮಕಾತಿ ಬಗ್ಗೆ ಅಧಿಸೂಚನೆಯಲ್ಲಿ ಅನುಬಂಧಗಳನ್ನು ಗಮನವಿಟ್ಟು ಓದಿದ್ದೇನೆ ಹಾಗೂ ಅವುಗಳಿಗೆ ಬದ್ಧವಾಗಿರುವುದಾಗಿ ಈ ಮೂಲಕ ದೃಢೀಕರಿಸುತ್ತೇನೆ.

I have read the provisions in the Notification regarding the Recruitment to the post of Inservice Armed Reserve Police Sub-Inspector (Men) carefully and I hereby declare to abide by the sub-rules.

1) ನನ್ನ ಪೂರ್ಣ ಹೆಸರು ________________________ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ ________________ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ ____________.

   My Full Name ________________________ working as__________________ and place of working ____________________.

2) ನನ್ನ ಜನ್ಮ ದಿನಾಂಕ ____________ ಆಗಿರುತ್ತದೆ. ಅದು ____________ ದಾಖಲೆಯನ್ನು ಆಧರಿಸಿರುತ್ತದೆ. 05.08.2019ಕ್ಕೆ ನನ್ನ ವಯಸ್ಸು ______________ ಇರುತ್ತದೆ.

   My date of birth is _____________. My age as on 05.08.2019 is ______________. It is supported by _____________ Document.

3) 05.08.2019ಕ್ಕೆ ನಾನು ಪದವೀಧರನಾಗಿದ್ದು ____________ ವಿಶ್ವವಿದ್ಯಾಲಯದಿಂದ __________ ವರ್ಷದಲ್ಲಿ ____________ ಪರೀಕ್ಷೆಯಲ್ಲಿ ಉತ್ತೀರ್ಣನಾಗಿದ್ದೇನೆ. ಅದಕ್ಕೆ ಆಧಾರವಾಗಿ __________ ದಾಖಲೆ ಇರುತ್ತದೆ.

   I am a Graduate as on 05.08.2019. I have passed _________________ Examination from __________ University in ___________ Year. The supporting document is __________ .

4) ನಾನು ___________ ಜಾತಿ/ಸಮುದಾಯ/ಪ್ರವರ್ಗಕ್ಕೆ ಸೇರಿದ್ದೇನೆ. ಅದಕ್ಕೆ ಆಧಾರವಾಗಿ __________ ದಾಖಲೆ ಇರುತ್ತದೆ.

   I belong to __________ Caste/Group/Category. The supporting document is __________ .

5) ನಾನು ______________ ರಂದು ಪೊಲೀಸ್ ಇಲಾಖೆಗೆ ಸೇರಿದೆ. 05.08.2019ಕ್ಕೆ ನನ್ನ ಸೇವಾವಧಿಯು __________ ವರ್ಷ _______ ತಿಂಗಳು _______ ದಿನಗಳಾಗಿರುತ್ತದೆ.

   I joined the Police Department on ________________. My length of Service as on 05.08.2019 is ________________ years ___________ months __________ days.

6) ನಾನು ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಬಾಗಿಯಾಗಿರುವುದಿಲ್ಲವೆಂದು ಹಾಗೂ ನನ್ನ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇರುವುದಿಲ್ಲವೆಂದು ಘೋಷಿಸುತ್ತೇನೆ.

   I declare that I have neither been involved in any Criminal case nor any Departmental Enquiry is pending against me.

ಮೇಲೆ ಹೇಳಿದ ವಿವರಗಳು ನಿಜವೆಂದು ನಾನು ಈ ಮೂಲಕ ಘೋಷಿಸುತ್ತೇನೆ. ಯಾವುದೇ ಮಾಹಿತಿಯು ಪರೀಕ್ಷೆ/ಸಂದರ್ಶನ/ನೇಮಕಾತಿ ಮುಂಚೆ, ಸಂದರ್ಭ ಅಥವಾ ತರುವಾಯ ಸುಳ್ಳು ಅಥವಾ ತಪ್ಪೆಂದು ಕಂಡು ಬಂದ ಸಂದರ್ಭದಲ್ಲಿ ಅಥವಾ ಅನರ್ಹತೆ ಪತ್ತೆಯಾದ ಸಂದರ್ಭದಲ್ಲಿ ನನ್ನ ವಿರುದ್ಧ ಕ್ರಮ ಕೈಗೊಳ್ಳಬಹುದಾಗಿದೆಯೆಂದು ನನಗೆ ತಿಳಿದಿರುತ್ತದೆ.

I hereby declare that the above information is true. I am aware that I am liable for action against me in the event of any information being found false or incorrect or ineligibility being detected before, during or after the examination/interview/appointment.

ಅಲ್ಲದೆ ಇದೇ ಬಗೆಯ ಪರೀಕ್ಷೆಗೆ ಹಾಜರಾಗದಂತೆ ನಾನು ತತ್ಸಮಾನ ಪರೀಕ್ಷೆಯಿಂದ ಉಚ್ಚಾಟಿಸಲ್ಪಟ್ಟಿಲ್ಲವೆಂದು ಸಹ ಘೋಷಿಸುತ್ತೇನೆ.

I further declare that I have not been debarred from appearing for any similar examination.

Date/ ದಿನಾಂಕ: ಅಭ್ಯರ್ಥಿಯ ಪೂರ್ಣ ಸಹಿ

Place/ ಸ್ಥಳ: Signature of the candidate

## ಅನುಬಂಧ– ಎ

## ಪೊಲೀಸ್ ಆಯುಕ್ತರವರ ಕಛೇರಿ, ಮೈಸೂರು ನಗರ

**i) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) –03 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 02 | - | - | - | - | 02 |
| ಪರಿಶಿಷ್ಟ ಜಾತಿ | 01 | - | - | - | - | 01 |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | - | - | - | - | - | - |
| ಪ್ರವರ್ಗ–2ಎ | - | - | - | - | - | - |
| ಪ್ರವರ್ಗ–2ಬಿ | - | - | - | - | - | - |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **03** | **-** | **-** | **-** | **-** | **03** |

**ii) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) ಸೇವೆಯಲ್ಲಿರುವವರ – 01 ಖಾಲಿ ಹುದ್ದೆಯ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | - | - | - | - | - | - |
| ಪರಿಶಿಷ್ಟ ಜಾತಿ | - | - | - | - | - | - |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | 01 | - | - | - | - | 01 |
| ಪ್ರವರ್ಗ–2ಎ | - | - | - | - | - | - |
| ಪ್ರವರ್ಗ–2ಬಿ | - | - | - | - | - | - |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **01** | **-** | **-** | **-** | **-** | **01** |

ಸಹಿ/–
ಪೊಲೀಸ್ ಆಯುಕ್ತರು,
ಮೈಸೂರು ನಗರ.

**ಅನುಬಂಧ– ಎ**

**ಆರಕ್ಷಕ ಮಹಾ ನಿರೀಕ್ಷಕ ರವರ ಕಛೇರಿ, ದಕ್ಷಿಣ ವಲಯ, ಮೈಸೂರು**

**ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) –05 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 03 | 01 | - | - | - | 02 |
| ಪರಿಶಿಷ್ಟ ಜಾತಿ | 01 | 01 | - | - | - | - |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | - | - | - | - | - | - |
| ಪ್ರವರ್ಗ–2ಎ | - | - | - | - | - | - |
| ಪ್ರವರ್ಗ–2ಬಿ | 01 | - | - | - | - | 01 |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **05** | **02** | **-** | **-** | **-** | **03** |

**ಟಿಪ್ಪಣಿ** : ಗ್ರಾಮೀಣ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.

ಸಹಿ/–
ಆರಕ್ಷಕ ಮಹಾ ನಿರೀಕ್ಷಕರು,
ದಕ್ಷಿಣ ವಲಯ, ಮೈಸೂರು.

## ಅನುಬಂಧ– ಎ

## ಆರಕ್ಷಕ ಮಹಾ ನಿರೀಕ್ಷಕ ರವರ ಕಛೇರಿ, ಪೂರ್ವ ವಲಯ, ದಾವಣಗೆರೆ

**ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) –04 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 02 | 01 | - | - | 01 | - |
| ಪರಿಶಿಷ್ಟ ಜಾತಿ | 01 | - | - | - | - | 01 |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | - | - | - | - | - | - |
| ಪ್ರವರ್ಗ–2ಎ | - | - | - | - | - | - |
| ಪ್ರವರ್ಗ–2ಬಿ | 01 | - | - | - | - | 01 |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **04** | **01** | **-** | **-** | **01** | **02** |

**ಟಿಪ್ಪಣಿ** : ಗ್ರಾಮೀಣ ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.

ಸಹಿ/–
ಆರಕ್ಷಕ ಮಹಾ ನಿರೀಕ್ಷಕರು,
ಪೂರ್ವ ವಲಯ, ದಾವಣಗೆರೆ.

**ಅನುಬಂಧ– ಎ**

**ಆರಕ್ಷಕ ಮಹಾ ನಿರೀಕ್ಷಕ ರವರ ಕಛೇರಿ, ಉತ್ತರ ವಲಯ, ಬೆಳಗಾವಿ**

**i) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) –08 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 04 | 02 | 01 | - | 01 | - |
| ಪರಿಶಿಷ್ಟ ಜಾತಿ | 01 | 01 | - | - | - | - |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | - | - | - | - | - | - |
| ಪ್ರವರ್ಗ–2ಎ | 02 | 01 | - | - | - | 01 |
| ಪ್ರವರ್ಗ–2ಬಿ | 01 | - | - | - | - | 01 |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **08** | **04** | **01** | **-** | **01** | **02** |

**ಟಿಪ್ಪಣಿ** : ಗ್ರಾಮೀಣ, ಮಾಜಿ ಸೈನಿಕರು ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.

ಸಹಿ/–
ಆರಕ್ಷಕ ಮಹಾ ನಿರೀಕ್ಷಕರು,
ಉತ್ತರ ವಲಯ, ಬೆಳಗಾವಿ.

## ಅನುಬಂಧ– ಎ

## ಆರಕ್ಷಕ ಮಹಾ ನಿರೀಕ್ಷಕ ರವರ ಕಛೇರಿ, ಪಶ್ಚಿಮ ವಲಯ, ಮಂಗಳೂರು

**i) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) –13 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 06 | 02 | - | 01 | 01 | 02 |
| ಪರಿಶಿಷ್ಟ ಜಾತಿ | 03 | 01 | - | - | - | 02 |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | 01 | - | - | - | - | 01 |
| ಪ್ರವರ್ಗ–2ಎ | 02 | - | - | - | - | 02 |
| ಪ್ರವರ್ಗ–2ಬಿ | 01 | - | - | - | - | 01 |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **13** | **03** | **-** | **01** | **01** | **08** |

**ii) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) ಸೇವೆಯಲ್ಲಿರುವವರ – 02 ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 01 | - | - | - | - | 01 |
| ಪರಿಶಿಷ್ಟ ಜಾತಿ | - | - | - | - | - | - |
| ಪರಿಶಿಷ್ಟ ಪಂಗಡ | 01 | - | - | - | - | 01 |
| ಪ್ರವರ್ಗ–1 | - | - | - | - | - | - |
| ಪ್ರವರ್ಗ–2ಎ | - | - | - | - | - | - |
| ಪ್ರವರ್ಗ–2ಬಿ | - | - | - | - | - | - |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **02** | **-** | **-** | **-** | **-** | **02** |

**ಟಿಪ್ಪಣಿ** : ಗ್ರಾಮೀಣ, ಯೋಜನಾ ನಿರಾಶ್ರಿತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.

ಸಹಿ/–
ಆರಕ್ಷಕ ಮಹಾ ನಿರೀಕ್ಷಕರು,
ಪಶ್ಚಿಮ ವಲಯ, ಮಂಗಳೂರು.

## ಅನುಬಂಧ– ಎ

## ಆರಕ್ಷಕ ಮಹಾ ನಿರೀಕ್ಷಕ ರವರ ಕಛೇರಿ, ಕೇಂದ್ರ ವಲಯ, ಬೆಂಗಳೂರು

**ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಆರ್‌ಎಸ್‌ಐ) (ಸಿಎಆರ್/ಡಿಎಆರ್) (ಪುರುಷ) –04 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 02 | 01 | - | - | 01 | - |
| ಪರಿಶಿಷ್ಟ ಜಾತಿ | 01 | - | - | - | - | 01 |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | - | - | - | - | - | - |
| ಪ್ರವರ್ಗ–2ಎ | 01 | - | - | - | - | 01 |
| ಪ್ರವರ್ಗ–2ಬಿ | - | - | - | - | - | - |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **04** | **01** | **-** | **-** | **01** | **02** |

**ಟಿಪ್ಪಣಿ** : ಗ್ರಾಮೀಣ ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.

ಸಹಿ/–
ಆರಕ್ಷಕ ಮಹಾ ನಿರೀಕ್ಷಕರು,
ಕೇಂದ್ರ ವಲಯ, ಬೆಂಗಳೂರು.

## ಅನುಬಂಧ – ಬಿ

## ಆಯುಕ್ತರ ಕಛೇರಿಗಳು ಮತ್ತು ವಲಯ ಕಛೇರಿಗಳಲ್ಲಿ ಖಾಲಿ ಇರುವ ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಪುರುಷ) (ಆರ್‌ಎಸ್‌ಐ) (ಸಿಎಆರ್/ಡಿಎಆರ್) ಒಟ್ಟು ಹುದ್ದೆಗಳ ವರ್ಗೀಕರಣದ ವಿವರ:

**i) ಸಶಸ್ತ್ರ ಮೀಸಲು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಪುರುಷ) (ಆರ್‌ಎಸ್‌ಐ) (ಸಿಎಆರ್/ಡಿಎಆರ್) – 37 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 19 | 07 | 01 | 01 | 04 | 06 |
| ಪರಿಶಿಷ್ಟ ಜಾತಿ | 08 | 03 | - | - | - | 05 |
| ಪರಿಶಿಷ್ಟ ಪಂಗಡ | - | - | - | - | - | - |
| ಪ್ರವರ್ಗ–1 | 01 | - | - | - | - | 01 |
| ಪ್ರವರ್ಗ–2ಎ | 05 | 01 | - | - | - | 04 |
| ಪ್ರವರ್ಗ–2ಬಿ | 04 | - | - | - | - | 04 |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **37** | **11** | **01** | **01** | **04** | **20** |

**ii) ಸಶಸ್ತ್ರ ಮೀಸಲು ಪೊಲೀಸ್‌ಸಬ್‌ಇನ್ಸ್‌ಪೆಕ್ಟರ್ (ಪುರುಷ) (ಆರ್‌ಎಸ್‌ಐ) (ಸಿಎಆರ್/ಡಿಎಆರ್) ಸೇವೆಯಲ್ಲಿರುವವರ –03 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|
| ಸಾಮಾನ್ಯ ವರ್ಗ | 01 | - | - | - | - |
| ಪರಿಶಿಷ್ಟ ಜಾತಿ | - | - | - | - | - |
| ಪರಿಶಿಷ್ಟ ಪಂಗಡ | 01 | - | - | - | - |
| ಪ್ರವರ್ಗ–1 | 01 | - | - | - | - |
| ಪ್ರವರ್ಗ–2ಎ | - | - | - | - | - |
| ಪ್ರವರ್ಗ–2ಬಿ | - | - | - | - | - |
| ಪ್ರವರ್ಗ–3ಎ | - | - | - | - | - |
| ಪ್ರವರ್ಗ–3ಬಿ | - | - | - | - | - |
| **ಒಟ್ಟು** | **03** | **-** | **-** | **-** | **03** |

**ಟಿಪ್ಪಣಿ:** ಗ್ರಾಮೀಣ, ಕನ್ನಡ, ಯೋಜನಾ ನಿರಾಶ್ರಿತ & ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು.

ಸಹಿ/–
ಡೈರೆಕ್ಟರ್ ಜನರಲ್ ಆಫ್ ಪೊಲೀಸ್
ಮತ್ತು ಸಿ&ಎಂಡಿ, ಕೆಎಸ್‌ಪಿಹೆಚ್ ಹಾಗೂ
ಎಡಿಜಿಪಿ, ನೇಮಕಾತಿ (ಪ್ರಭಾರ), ಬೆಂಗಳೂರು.